**All India Radio: Bangalore**
**National Bulletin In Kannada**
**24.02.2026  07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**24.02.2026  07.35 a.m.**

**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ಭಾರತೀಯ ಚುನಾವಣಾ ಆಯೋಗ ಮತ್ತು ರಾಜ್ಯ ಚುನಾವಣಾ ಆಯುಕ್ತರ ರಾಷ್ಟ್ರೀಯ ದುಂಡು ಮೇಜಿನ ಸಭೆ ಆಯೋಜನೆ
2. ಮಹಾರಾಷ್ಟ್ರ, ಜಾರ್ಖಂಡ್ ಮತ್ತು ರಾಜಸ್ಥಾನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ನಾಲ್ಕು ದಿನಗಳ ಭೇಟಿ
3. ಕೇಂದ್ರ ಸಚಿವಾಲಯಗಳು ಮತ್ತು ಸಾರ್ವಜನಿಕ ವಲಯದ ಘಟಕಗಳ ಆಸ್ತಿ ನಗದೀಕರಣ ಮಾರ್ಗಸೂಚಿಯ ೨ನೇ ಹಂತಕ್ಕೆ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ
4. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಸೂಪರ್-೮ರ ಹಂತದ ಗುಂಪು-೧ ರ ಪಂದ್ಯದಲ್ಲಿ ಜಿಂಬಾಬ್ವೆ ವಿರುದ್ಧ ವೆಸ್ಟ್ ಇಂಡೀಸ್‌ಗೆ ೧೦೭ ರನ್ ಜಯ

<><><><>

ನವದೆಹಲಿಯ ಭಾರತ್ ಮಂಟಪದಲ್ಲಿಂದು ಭಾರತೀಯ ಚುನಾವಣಾ ಆಯೋಗ ಮತ್ತು ರಾಜ್ಯ ಚುನಾವಣಾ ಆಯುಕ್ತರ ರಾಷ್ಟ್ರೀಯ ದುಂಡು ಮೇಜಿನ ಸಭೆಯನ್ನು ಆಯೋಜಿಸಲಾಗುತ್ತಿದೆ. ಕಳೆದ ಬಾರಿ ೧೯೯೯ ರಲ್ಲಿ ನಡೆದಿದ್ದ ಈ ಸಭೆಯನ್ನು ಭಾರತೀಯ ಚುನಾವಣಾ ಆಯೋಗ ೨೭ ವರ್ಷಗಳ ನಂತರ ಆಯೋಜಿಸುತ್ತಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅಧ್ಯಕ್ಷತೆಯಲ್ಲಿ ನಡೆಯಲಿರುವ ದುಂಡು ಮೇಜಿನ ಸಭೆ, ಚುನಾವಣಾ ಆಯುಕ್ತರಾದ ಡಾ. ಸುಖಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರ ಉಪಸ್ಥಿತಿಯಲ್ಲಿ ನಡೆಯಲಿದೆ. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ರಾಜ್ಯ ಚುನಾವಣಾ ಆಯುಕ್ತರು ತಮ್ಮ ಕಾನೂನು ಮತ್ತು ತಾಂತ್ರಿಕ ತಜ್ಞರೊಂದಿಗೆ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದಲ್ಲದೆ, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾ ಅಧಿಕಾರಿಗಳು ಸಹ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಚುನಾವಣಾ ಆಯೋಗ ಮತ್ತು ರಾಜ್ಯ ಚುನಾವಣಾ ಆಯುಕ್ತರ ಕಾರ್ಯಚಟುವಟಿಕೆಯಲ್ಲಿ ಅವರ ಕಾನೂನು ಚೌಕಟ್ಟಿನೊಳಗೆ ಚುನಾವಣಾ ಪ್ರಕ್ರಿಯೆಗಳು ಮತ್ತು ಲಾಜಿಸ್ಟಿಕ್ಸ್‌ಗೆ ಸಂಬಂಧಿಸಿದಂತೆ ಸಮನ್ವಯತೆಯನ್ನು ಬೆಳೆಸುವುದು ದುಂಡು ಮೇಜಿನ ಸಮ್ಮೇಳನದ ಪ್ರಾಥಮಿಕ ಉದ್ದೇಶವಾಗಿದೆ. ಈ ಚರ್ಚೆಗಳು ರಚನಾತ್ಮಕ ವಿಚಾರ ವಿನಿಮಯಕ್ಕೆ ವೇದಿಕೆ ಒದಗಿಸಲಿದ್ದು, ಚುನಾವಣಾ ನಿರ್ವಹಣೆಯಲ್ಲಿ ಸಹಕಾರಿ ಒಕ್ಕೂಟದ ಮನೋಭಾವವನ್ನು ಬಲಪಡಿಸುತ್ತವೆ ಎಂದು ನಿರೀಕ್ಷಿಸಲಾಗಿದೆ. ದಿನವಿಡೀ ನಡೆಯುವ ಸಮ್ಮೇಳನದಲ್ಲಿ, ಚುನಾವಣಾ ಪ್ರಕ್ರಿಯೆಗಳನ್ನು ಬಲಪಡಿಸುವುದರ ಜೊತೆಗೆ ತಂತ್ರಜ್ಞಾನ, ಇವಿಎಂಗಳು ಮತ್ತು ಮತದಾರರ ಪಟ್ಟಿಗಳ ಮೇಲೆ ಚರ್ಚೆಗಳು ಕೇಂದ್ರೀಕರಿಸಲಿವೆ. ಆಯೋಗದ ಹಿರಿಯ ಅಧಿಕಾರಿಗಳು ಇತ್ತೀಚೆಗೆ ಪ್ರಾರಂಭಿಸಲಾದ ಇಸಿಐ ನೆಟ್ ಡಿಜಿಟಲ್ ವೇದಿಕೆ ಮತ್ತು ಚುನಾವಣಾ ಸೇವೆಗಳನ್ನು ಸುಗಮಗೊಳಿಸುವಲ್ಲಿ ಅದರ ಪರಿವರ್ತನಾ ಸಾಮರ್ಥ್ಯ ಸೇರಿದಂತೆ ಪ್ರಮುಖ ತಾಂತ್ರಿಕ ಮತ್ತು ಕಾರ್ಯಾಚರಣೆಯ ಉಪಕ್ರಮಗಳ ಕುರಿತು ಪ್ರಸ್ತುತಿಗಳನ್ನು ನೀಡಲಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ನಾಲ್ಕು ದಿನಗಳ ಕಾಲ ಮಹಾರಾಷ್ಟ್ರ, ಜಾರ್ಖಂಡ್ ಮತ್ತು ರಾಜಸ್ಥಾನಕ್ಕೆ ಭೇಟಿ ನೀಡಲಿದ್ದಾರೆ. ಇಂದು ಪಿಡಿ ಹಿಂದೂಜಾ ಆಸ್ಪತ್ರೆಯು ಮುಂಬೈನ ಲೋಕ ಭವನದಲ್ಲಿ

ಆಯೋಜಿಸಿರುವ 'ಜೀವಗಳ ರಕ್ಷಣೆ ಮತ್ತು ಆರೋಗ್ಯಕರ ಭಾರತವನ್ನು ನಿರ್ಮಿಸುವುದು' ಎಂಬ ರಾಷ್ಟ್ರವ್ಯಾಪಿ ಅಭಿಯಾನವನ್ನು ರಾಷ್ಟ್ರಪತಿಗಳು ಉದ್ಘಾಟಿಸಲಿದ್ದಾರೆ. ನಾಳೆ ಬುಲ್ಢಾನಾದ ಶೇಗಾಂವ್‌ನಲ್ಲಿ ಕೇಂದ್ರ ಆಯುಷ್ ಸಚಿವಾಲಯ ಆಯೋಜಿಸಿರುವ 'ರಾಷ್ಟ್ರೀಯ ಆರೋಗ್ಯ ಮೇಳ ೨೦೨೬ರಲ್ಲಿ ಅವರು ಭಾಗವಹಿಸಲಿದ್ದಾರೆ. ನಾಡಿದ್ದು ನಾಗ್ಪುರದಲ್ಲಿ ಬ್ರಹ್ಮ ಕುಮಾರಿಯರು ಆಯೋಜಿಸಿರುವ 'ಏಕತೆ ಮತ್ತು ವಿಶ್ವಾಸದ ಮೂಲಕ ಮಹಾರಾಷ್ಟ್ರದ ಸುವರ್ಣ ಯುಗ' ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಇದೇ ೨೬ ರಂದು ಅವರು, ಜಾರ್ಖಂಡ್‌ನ ಜೆಮ್ಶೆಡ್‌ಪುರದ ಶ್ರೀ ಜಗನಾಥ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ದತ್ತಿ ಕೇಂದ್ರ ಟ್ರಸ್ಟ್ ಆಯೋಜಿಸಿರುವ ಶ್ರೀ ಜಗನ್ನಾಥ ದೇವಾಲಯದ ಭೂಮಿ ಪೂಜೆ ಸಮಾರಂಭದಲ್ಲಿ ಭಾಗವಹಿಸಿ ನಂತರ ಅವರು ಜೆಮ್ಶೆಡ್‌ಪುರದ ಮಣಿಪಾಲ್ ಟಾಟಾ ವೈದ್ಯಕೀಯ ಕಾಲೇಜಿಗೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

<><><>

ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ನವದೆಹಲಿಯಲ್ಲಿ ಕೇಂದ್ರ ಸಚಿವಾಲಯಗಳು ಮತ್ತು ಸಾರ್ವಜನಿಕ ವಲಯದ ಘಟಕಗಳ ಆಸ್ತಿ ನಗದೀಕರಣ ಮಾರ್ಗಸೂಚಿಯ ಎರಡನೇ ಹಂತಕ್ಕೆ ಚಾಲನೆ ನೀಡಿದ್ದಾರೆ. ಕೇಂದ್ರ ಬಜೆಟ್ ೨೦೨೫-೨೬ ರಲ್ಲಿ ಘೋಷಿಸಲಾದ 'ಆಸ್ತಿ ನಗದೀಕರಣ ಯೋಜನೆ ೨೦೨೫-೩೦' ರ ಆಧಾರದ ಮೇಲೆ, ಮೂಲಸೌಕರ್ಯ ಸಚಿವಾಲಯಗಳೊಂದಿಗೆ ಸಮಾಲೋಚಿಸಿ ನೀತಿ ಆಯೋಗವು ಈ ಎರಡನೇ ಹಂತದ ಮಾರ್ಗಸೂಚಿಯನ್ನು ಸಿದ್ಧಪಡಿಸಿದೆ. ರಾಷ್ಟ್ರೀಯ ಆಸ್ತಿ ನಗದೀಕರಣ ಪೈಪ್‌ಲೈನ್ ೨.೦ ಅಡಿಯಲ್ಲಿ, ೨೦೨೫-೨೬ ರಿಂದ ೨೦೨೯-೩೦ ರವರೆಗಿನ ಐದು ವರ್ಷಗಳ ಅವಧಿಯಲ್ಲಿ ಕೇಂದ್ರ ಸಚಿವಾಲಯಗಳು ಮತ್ತು ಸಾರ್ವಜನಿಕ ವಲಯದ ಘಟಕಗಳಿಂದ ಒಟ್ಟು ೧೬.೭೨ ಲಕ್ಷ ಕೋಟಿ ರೂಪಾಯಿಗಳ ನಗದೀಕರಣ ಸಾಮರ್ಥ್ಯವನ್ನು ಅಂದಾಜಿಸಲಾಗಿದೆ. ಇದರಲ್ಲಿ ಖಾಸಗಿ ವಲಯದ ೫.೮ ಲಕ್ಷ ಕೋಟಿ ರೂಪಾಯಿಗಳ ಹೂಡಿಕೆಯೂ ಸೇರಿದೆ.

<><><>

ಭಾರತ-ಕೆನಡಾ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದಕ್ಕೆ ಸಂಬಂಧಿಸಿದ ಚರ್ಚೆಗಳನ್ನು ಮುಂದುವರಿಸುವ ಕುರಿತು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ನಿನ್ನೆ ಕೆನಡಾದ ಅಂತಾರಾಷ್ಟ್ರೀಯ ವ್ಯಾಪಾರ ಸಚಿವ ಮಣೀಂದರ್ ಸಿಧು ಅವರೊಂದಿಗೆ ವರ್ಚುವಲ್ ಮೂಲಕ ಸಂವಾದ ನಡೆಸಿದ್ದಾರೆ. ಈ ಆರ್ಥಿಕ ಪಾಲುದಾರಿಕೆಯನ್ನು ಬಲಪಡಿಸಲು ಮುಂಬರುವ ತಿಂಗಳುಗಳಲ್ಲಿ ನಿಯಮಿತ ನಿಯೋಗ ಮಟ್ಟದ ಮಾತುಕತೆ ಮೂಲಕ ವ್ಯಾಪಾರ ಸಂಬಂಧ ಬಲಪಡಿಸುವ ಕುರಿತು ಚರ್ಚಿಸಿರುವುದಾಗಿ ಕೇಂದ್ರ ಸಚಿವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><>

ಕೃತಕ ಬುದ್ಧಿಮತ್ತೆಯು ಭಾರತದಲ್ಲಿ ಗ್ರಾಮೀಣ ಪರಿವರ್ತನೆಯ ಮೂಲ ಸ್ತಂಭವಾಗಿ ಹಂತಹಂತವಾಗಿ ಅಭಿವೃದ್ಧಿಯಾಗುತ್ತಿದ್ದು, ಸಮಗ್ರ ಅಭಿವೃದ್ಧಿ ಗುರಿಗಳನ್ನು ಹೊಂದಿರುವ ಸಂಯೋಜಿತ ಸಾರ್ವಜನಿಕ ಮೂಲಸೌಕರ್ಯವಾಗಿದೆ.

**ಈ ಕುರಿತು ಒಂದು ವರದಿ :**

**ಧ್ವನಿ : ಅಭಯ್ (೪೯ ಸೆಕೆಂಡ್‌ಗಳು)**

ಕಾರ್ಯತಂತ್ರದ ದೃಷ್ಟಿಕೋನ, ಆಡಳಿತಾತ್ಮಕ ಭದ್ರತಾ ಕ್ರಮಗಳು, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಬಹುಭಾಷಾ ವೇದಿಕೆಗಳು ಹಾಗೂ ಕೃಷಿ, ಆರೋಗ್ಯ, ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಸ್ಥಳೀಯ ಆಡಳಿತ ಸೇರಿದಂತೆ ವಿವಿಧ ಕ್ಷೇತ್ರಗಳ ಸಮಗ್ರತೆಯ ಮೂಲಕ, ಕೃತಕ ಬುದ್ಧಿಮತ್ತೆಯನ್ನು ಮಾನವ ಸಾಮರ್ಥ್ಯವನ್ನು ವೃದ್ಧಿಸಲು ಹಾಗೂ ಬಲಪಡಿಸಲು ಅಳವಡಿಸಲಾಗುತ್ತಿದೆ. ಸೇವಾ ಪೂರೈಕೆಯನ್ನು ಬಲಪಡಿಸುವುದು, ದತ್ತಾಂಶ ಆಧಾರಿತ ಆಡಳಿತಕ್ಕೆ

ಬೆಂಬಲ ನೀಡುವುದು ಹಾಗೂ ವಂಚಿತ ಸಮುದಾಯಗಳನ್ನು ಅಧಿಕೃತ ವ್ಯವಸ್ಥೆಗಳೊಳಗೆ ಸೇರಿಸುವುದರ ಮೂಲಕ, ಕೃತಕ ಬುದ್ಧಿಮತ್ತೆ ದೇಶದಲ್ಲಿ ಗ್ರಾಮೀಣ ಅಭಿವೃದ್ಧಿಗೆ ಮೂಲ ಚಾಲಕಶಕ್ತಿಯಾಗಿ ಹೊರಹೊಮ್ಮುತ್ತಿದೆ. ಪಂಚಾಯತ್ ರಾಜ್ ಸಂಸ್ಥೆಗಳು, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಮತ್ತು ಕಲ್ಯಾಣ ವ್ಯವಸ್ಥೆಗಳೊಂದಿಗೆ ಎಐ, ಪಾರದರ್ಶಕತೆ, ಕಾರ್ಯಕ್ಷಮತೆ, ನೀತಿ ನಿರೂಪಣೆ ಹಾಗೂ ತಳಮಟ್ಟದ ಭಾಗವಹಿಸುವಿಕೆಯನ್ನು ಹೆಚ್ಚಿಸುತ್ತಿದೆ.

<><><><>

ಐಬಿಎಂ ಸಂಸ್ಥೆ, ಭಾರತದಾದ್ಯಂತ ಕ್ವಾಂಟಮ್ ಕಂಪ್ಯೂಟಿಂಗ್ ಮತ್ತು ಕ್ಲೌಡ್ ಮೂಲಸೌಕರ್ಯದಲ್ಲಿ ಹೂಡಿಕೆ ಮಾಡಲು ಯೋಜಿಸುತ್ತಿದೆ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಐಬಿಎಂ ದೇಶದಲ್ಲಿ ತನ್ನ ವಿನ್ಯಾಸ ತಂಡಗಳನ್ನು, ವಿಶೇಷವಾಗಿ ಸುಧಾರಿತ ಸೆಮಿಕಂಡಕ್ಟರ್ ನೋಡ್‌ಗಳಲ್ಲಿ ಮತ್ತಷ್ಟು ಬಲಪಡಿಸುತ್ತಿದೆ. ಈ ಪ್ರಯತ್ನಗಳು ದೇಶದ ಯುವ ಪ್ರತಿಭಾವಂತರಿಗೆ ಹೆಚ್ಚಿನ ಅವಕಾಶಗಳನ್ನು ಒದಗಿಸುತ್ತದೆ ಎಂದು ಹೇಳಿದ್ದಾರೆ.

<><><><>

ನವದೆಹಲಿಯಲ್ಲಿ ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಭಾರತೀಯ ಯುವ ಕಾಂಗ್ರೆಸ್ ನಡೆಸಿದ ಪ್ರತಿಭಟನೆಯನ್ನು ದೇಶದಾದ್ಯಂತದ ಸುಮಾರು ೧೬೦ ಶೈಕ್ಷಣಿಕ ತಜ್ಞರು ಖಂಡಿಸಿದ್ದಾರೆ. ಭಾರತದ ಪ್ರತಿಷ್ಠಿತ ಸಂಸ್ಥೆಗಳ ಈ ತಜ್ಞರು ಸಹಿ ಹಾಕಿರುವ ಜಂಟಿ ಹೇಳಿಕೆಯಲ್ಲಿ, ಈ ಕೃತ್ಯವು ಅತ್ಯಂತ ವಿಷಾದನೀಯ ಎಂದು ಬಣ್ಣಿಸಲಾಗಿದೆ. ಈ ಶೃಂಗಸಭೆಯು ಯಾವುದೇ ಪಕ್ಷಪಾತದ ವೇದಿಕೆಯಾಗಿರಲಿಲ್ಲ ಅಥವಾ ದೇಶೀಯ ರಾಜಕೀಯ ಪ್ರಚಾರದ ಸ್ಥಳವೂ ಆಗಿರಲಿಲ್ಲ ಎಂದು ಅವರು ತಿಳಿಸಿದ್ದಾರೆ. ಇಂತಹ ಮಹತ್ವದ ಜಾಗತಿಕ ಕಾರ್ಯಕ್ರಮದ ಸಂದರ್ಭದಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಈ ಧೋರಣೆಯು ರಾಷ್ಟ್ರೀಯ ಹಿತಾಸಕ್ತಿಗೆ ಪೂರಕವಾಗಿಲ್ಲ ಎಂದು ತಜ್ಞರು ಹೇಳಿದ್ದಾರೆ.

<><><><>

ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಇದೇ ೨೬ ರಿಂದ ೯ ದಿನಗಳವರೆಗೆ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಇದು ಉಭಯ ರಾಷ್ಟ್ರಗಳ ನಡುವಿನ ಸಂಬಂಧದಲ್ಲಿ ಪ್ರಮುಖ ಬೆಳವಣಿಗೆಯನ್ನು ಸೂಚಿಸುತ್ತದೆ. ಹಿಂದಿನ ಆಡಳಿತದಲ್ಲಿ ಸಂಬಂಧಗಳು ಹದಗೆಟ್ಟ ನಂತರ ಕೆನಡಾದ ನಾಯಕರೊಬ್ಬರು ನೀಡುತ್ತಿರುವ ಮೊದಲ ಅಧಿಕೃತ ಭೇಟಿ ಇದಾಗಿದೆ. ಪ್ರಧಾನಿ ಮಾರ್ಕ್ ಕಾರ್ನಿ ಮಾರ್ಚ್ ೨ ರಂದು ಪ್ರಧಾನಿ ನರೇಂದ್ರ ಮೋದಿಯವರೊಂದಿಗೆ ಉನ್ನತ ಮಟ್ಟದ ಮಾತುಕತೆಗಾಗಿ ನವದೆಹಲಿಗೆ ತೆರಳುವ ಮೊದಲು ಮುಂಬೈನಲ್ಲಿ ವ್ಯಾಪಾರ ನಾಯಕರನ್ನು ಭೇಟಿ ಮಾಡಲಿದ್ದಾರೆ.

<><><><>

ಜಾರ್ಖಂಡ್‌ನ ಚತ್ರಾ ಜಿಲ್ಲೆಯ ಸಿಮಾರಿಯಾ ಸಮೀಪ ನಿನ್ನೆ ಸಂಜೆ ರಾಂಚಿಯಿಂದ ದೆಹಲಿಗೆ ತೆರಳುತ್ತಿದ್ದ ಏರ್ ಆಂಬುಲೆನ್ಸ್ ವಿಮಾನ ಅಪಘಾತಕ್ಕೀಡಾಗಿ ಪತನಗೊಂಡ ಹಿನ್ನೆಲೆಯಲ್ಲಿ ಪ್ರಯಾಣಿಸುತ್ತಿದ್ದ ಎಲ್ಲಾ ಏಳು ಮಂದಿ ಸಾವನಪ್ಪಿದ್ದಾರೆ. ಈ ಏರ್ ಆಂಬುಲೆನ್ಸ್ ವಿಮಾನವು ಸಂಜೆ ೭.೧೧ಕ್ಕೆ ರಾಂಚಿ ವಿಮಾನ ನಿಲ್ದಾಣದಿಂದ ಹೊರಟ ಕೆಲವೇ ಕ್ಷಣಗಳಲ್ಲಿ ಪತನಗೊಂಡಿದೆ.

<><><><>

ಮೆಕ್ಸಿಕೋದ ಜಲಿಸ್ಕೋದಲ್ಲಿ ಡ್ರಗ್ ಮಾಫಿಯಾ ನಾಯಕನೊಬ್ಬನ ಹತ್ಯೆಯ ನಂತರ ನಡೆದ ಪ್ರತಿಕಾರದ ಹಿಂಸಾಚಾರದಲ್ಲಿ ರಾಷ್ಟ್ರೀಯ ಭದ್ರತಾ ಪಡೆಯ  ಕನಿಷ್ಠ ೨೫ ಸೈನಿಕರು ಮೃತಪಟ್ಟಿದ್ದಾರೆ. ಮೆಕ್ಸಿಕನ್ ವಿಶೇಷ ಪಡೆಗಳಿಂದ ಬಂಧಿಸಲ್ಪಟ್ಟ ಬೆನ್ನಲ್ಲೇ, 'ಎಲ್ ಮೆಂಚೊ" ಎಂದೇ ಖ್ಯಾತನಾದ ನೆಮೆಸಿಯೊ ಒಸೆಗುಯೆರಾ ಸರ್ವಾಂಟೆಸ್ ನಿನ್ನೆ ವಶದಲ್ಲಿದ್ದಾಗಲೇ ಮೃತಪಟ್ಟರು.

<><><><>

ಮುಂಬೈನ ವಾಂಖೆಡೆ ಕ್ರೀಡಂಗಣದಲ್ಲಿ ಕಳೆದ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್-೮ರ ಹಂತದ ಗುಂಪು-೧ ರ ಪಂದ್ಯದಲ್ಲಿ ಜಿಂಬಾಬ್ವೆ ವಿರುದ್ಧ ವೆಸ್ಟ್ ಇಂಡೀಸ್ ತಂಡ ೧೦೭ ರನ್‌ಗಳ ಭರ್ಜರಿ ಜಯ ದಾಖಲಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>